**ಪಿಡಬ್ಲೂ: 6** **ಸಿ.ಸಿ ನಂ.1120/2019**

ದಿನಾಂಕ 18-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದಃ-**

ಆರೋಪಿತರು ನೀವು ಹೇಳಿದಂತೆ ನಿಮಗೆ ಚಪ್ಪಲಿಯಿಂದ ಹೊಡೆದಿಲ್ಲ ಎಂದರೆ ಸಾಕ್ಷಿಯು ನಾನು ಆ ಕಾಲಕ್ಕೆ ಅಲ್ಲಿದ್ದೆ, ಅವರು ನನಗೆ ಹೊಡೆದಿದ್ದರು ಎನ್ನುತ್ತಾರೆ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ-**

1. ನನಗೆ ಕನ್ನಡ ಓದಲು ಬರೆಯಲು ಬರುತ್ತದೆ. ಈ ಕೇಸಿನ ವಿಚಾರಣೆಗೆ ಹಾಜರಾಗುವಂತೆ ನನಗೆ ಯಾವುದೇ ನೋಟೀಸನ್ನು ಕೊಟ್ಟಿಲ್ಲ. ನಾನು ಪೋಲೀಸರಿಗೆ ಎಂದಿಗೂ ಹೇಳಿಕೆ ಕೊಟ್ಟಿಲ್ಲ.

2. ನಿಮ್ಮ ಮುಖ್ಯವಿಚಾರಣೆಯಲ್ಲಿ ಹೇಳಿದ ವಿಷಯಗಳನ್ನು ಇದೇ ಮೊದಲು ನ್ಯಾಯಾಲಯದಲ್ಲಿ ಹೇಳುತ್ತಿದ್ದೀರಿ, ಪೋಲೀಸರ ಮುಂದೆ & ಬೇರೆ ಯಾರ ಮುಂದೆಯೂ ಹೇಳಿಲ್ಲ ಎಂದರೆ ಸರಿ. ಈ ಹಿಂದೆ ನ್ಯಾಯಾಲಯಕ್ಕೆ ಸಾಕ್ಷಿ ಹೇಳಲು ಬರುವಂತೆ ಪೋಲೀಸರು ಕರೆ ಮಾಡಿ ಹೇಳಿದ್ದರು. ನಿಮಗೆ ಈ ಕೇಸಿನ ಬಗ್ಗೆ ಯಾವುದೇ ಮಾಹಿತಿ ಇಲ್ಲ, ನಿಮ್ಮ ಮಾವ ಹೇಳಿದಂತೆ ನೀವು ಸಾಕ್ಷಿ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ. ನಿಮ್ಮ ಮುಖ್ಯವಿಚಾರಣೆಯಲ್ಲಿ ಹೇಳಿದ ವಿಷಯಗಳು ಸುಳ್ಳು ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಃ-**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

C/c 2 **ನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಸಿಂಧನೂರು.**